ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	160
ಸದಸ್ಯರ ಹೆಸರು	:	ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	01-02-2021.
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆ ಚಾಲನೆಯಲ್ಲಿ ಇದೆಯೇ;	ಇಲ್ಲ
ಆ)	ಬಹಳಷ್ಟು ವರ್ಷಗಳಿಂದ ಉಪನ್ಯಾಸಕರ ಹುದ್ದೆಗೆ ಅರ್ಹತೆ ಹೊಂದಿದ್ದರೂ ಬಹಳಷ್ಟು ಪ್ರಾಥಮಿಕ ಶಾಲಾ ಸಹ ಶಿಕ್ಷಕರ ಉಪನ್ಯಾಸಕರ ಹುದ್ದೆಯ ಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 71 ಎಸ್ಆರ್ಇ 94 ದಿನಾಂಕ:27-05-1998ರಲ್ಲಿ ಶೇಕಡ 50 ರಷ್ಟು ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 50ರಷ್ಟು ಹುದ್ದೆಗಳನ್ನು ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿತ್ತು. ಅದರಂತೆ 2012ರಲ್ಲಿ ಅರ್ಹ 750 ಪ್ರೌಢಶಾಲಾ ಸಹ ಶಿಕ್ಷಕರನ್ನು ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲಾಗಿದೆ. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 35 ಡಿಜಿಓ 2009 ದಿನಾಂಕ:15-05-2014ರಲ್ಲಿ ವೃಂದ ಮತ್ತು ನೇಮಕಾತಿ ನಿಯಮಕ್ಕೆ ಪರಿಷ್ಕರಣೆ ಮಾಡಿ ಶೇಕಡ 75ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 25ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿದೆ. ದಿನಾಂಕ:01-09-2020ಕ್ಕೆ ಅಂತ್ಯಗೊಂಡಂತೆ 272 ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳು ಹೆಚ್ಚುವರಿಯಾಗಿರುವುದರಿಂದ ಉಪನ್ಯಾಸಕರ ಹುದ್ದೆಗೆ ಬಡ್ತಿಗೆ ಅವಕಾಶವಿರುವುದಿಲ್ಲ.
ಇ)	ಬಂದಿದ್ದರೆ, ಸರ್ಕಾರವು ಈ ಬಗ್ಗೆ ಕೈಗೊಂಡಿರುವ ಕ್ರಮ ಏನು;	ದಿನಾಂಕ:01-09-2020ಕ್ಕೆ ಅಂತ್ಯಗೊಂಡಂತೆ 272 ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳು ಹೆಚ್ಚುವರಿಯಾಗಿದ್ದು ಪ್ರಶ್ನೆ ಉದ್ಭವಿಸುವುದಿಲ್ಲ.

ಈ)	ಯಾವ ಕಾಲಮಿತಿಯೊಳಗೆ ಸಹ ಶಿಕ್ಷಕರಿಗೆ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು)	ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಒತ್ತ ಕೋಟಾದಡಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಹುದ್ದೆಗಳು ವಯೋ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾದಾಗ ನಿಯಮಾನುಸಾರ ಪ್ರೌಢ ಶಾಲೆಗಳ ಗ್ರೇಡ್-2 ಸಹ ಶಿಕ್ಷಕರುಗಳಿಗೆ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಇಡಿ 16 ಡಿಜಿಡಬ್ಲ್ಯೂ 2021

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.